ಇ) ವಿವರಗಳು ಕೆಳಕಂಡಂತಿದೆ:-

ಸಾಲು	ಭಿಕ್ಷುಕರ ಸಂಖ್ಯೆ
2001-02	1904
2002-03	1726
2003-04	550

(11.7.2003 ರಲ್ಲಿರುವಂತೆ)

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಕೀಲರಿಗೆ ಸ್ಟೈಫಂಡ್

3146 (3895) : ಶ್ರೀ ಕೆ.ಎನ್. ಸುಬ್ಬಾರೆಡ್ಡಿ (ಬಸವನಗುಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಕೀಲರಿಗೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನೀಡುವ ಸ್ಟೈಫೆಂಡ್ ಸರಿಯಾಗಿ ವಿತರಣೆ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಕಾಲ ಕಾಲಕ್ಕೆ ಸ್ಟೈಫಂಡ್ ವಿತರಣೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಉತ್ತರ ಕನ್ನಡ ಮತ್ತು ದಕ್ಷಿಣ ಜಿಲ್ಲೆಗಳಲ್ಲಿರುವ ಖಾರ್ವಿ ಜನಾಂಗವನ್ನು ಪರಿಶಿಷ್ಟ ಜಾತಿಗೆ ಸೇರಿರುವುದು

3148 (3446) : ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಅಂಕೋಲ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉತ್ತರ ಕನ್ನಡ ಮತ್ತು ದಕ್ಷಿಣ ಜಿಲ್ಲೆಗಳಲ್ಲಿ ವಾಸಿಸುತ್ತಿರುವ ಖಾರ್ವಿ ಜನಾಂಗ (ಕೊಂಕಣಿ ಭಾಷೆ ಮಾತನಾಡುವವರು) ಯಾವುದೇ ರೀತಿಯ ಅಭಿವೃದ್ಧಿ ಹೊಂದದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಜನಾಂಗದ ಆರ್ಥಿಕ ಮತ್ತು ಶೈಕ್ಷಣಿಕ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ವಿಶೇಷ ಕಾರ್ಯಕ್ರಮಗಳೇನು?

ಇ) ಈ ಜನಾಂಗವನ್ನು ಪರಿಶಿಷ್ಟ ಜಾತಿಗೆ ಸೇರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಈ ಜಾತಿಗಳನ್ನು ಸಂಬಂಧಿಸಿದ ಜಿಲ್ಲೆಗಳಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಖಾರ್ವಿ ಜನಾಂಗವನ್ನು ಪ್ರವರ್ಗ-Iಕ್ಕೆ ಸೇರಿಸಲ್ಪಟ್ಟಿರುತ್ತದೆ. ಹಿಂದುಳಿದ ವರ್ಗಗಳ ಇಲಾಖಾ ನಿಗಮದ ವತಿಯಿಂದ ಕೆಳಕಂಡ ಕಾರ್ಯಕ್ರಮಗಳನ್ನು ಪ್ರವರ್ಗ-Iಕ್ಕೆ ಅನುಷ್ಠಾನ ಗೊಳಿಸಲಾಗುತ್ತಿದ್ದು, ಖಾರ್ವಿ ಜನಾಂಗವನ್ನು ಸಹಾ ಈ ಯೋಜನೆಗಳನ್ನು ಪಡೆಯಲು ಅರ್ಹರಿರುತ್ತಾರೆ.

1. ಬೆಳ್ಳ ಬೆಳಕು
2. ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ
3. ಹೆಚ್ಚುವರಿ ಭೋಜನ ವೆಚ್ಚ
4. ಶುಲ್ಕ ವಿನಾಯಿತಿ ನೀಡಿಕೆ

5. ವಿದ್ಯಾರ್ಥಿವೇತನ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳಿಂದ ಸೌಯಂ ಉದ್ಯೋಗ ಸಾಲ ಯೋಜನೆ ಮತ್ತು ವಿವಿಧ ರೀತಿಯ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಇವರಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ. ಈ ಜನಾಂಗದ ಅಭಿವೃದ್ಧಿಗೆ ಪ್ರತ್ಯೇಕವಾಗಿ ಯಾವುದೇ ವಿಶೇಷ ಕಾರ್ಯಕ್ರಮಗಳನ್ನು ಕೈ ಗೊಂಡಿರುವುದಿಲ್ಲ.

ಇ) ಈ ಜನಾಂಗವನ್ನು ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗಕ್ಕೆ ಸೇರಿಸಲು ಮನವಿ ಬಂದಿದೆ. ಗಂಗಾಮತ ಮತ್ತು ಇತರ ಪರ್ಯಾಯ ಪದಗಳಲ್ಲಿ ಒಂದಾದ ಖಾರ್ವಿ ಜಾತಿಯನ್ನು ಪರಿಶಿಷ್ಟ ವರ್ಗಗಳ ಜಾತಿ ಪಟ್ಟಿಯಲ್ಲಿ ಸೇರಿಸುವ ಬಗ್ಗೆ ಪರಿಶೀಲಿಸಲು ಎಥಿನೋಗ್ರಾಫಿಕ್ ವಿವರಗಳನ್ನು ಸಂಗ್ರಹಿಸಿ ಕಳುಹಿಸಿ ಕಳುಹಿಸಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಹಿಂದುಳಿದ ವರ್ಗದವರ ಅಭಿವೃದ್ಧಿ ಧೋರಣೆ

3149 (3447) : ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹಿಂದುಳಿದ ವರ್ಗದವರ ಅಭಿವೃದ್ಧಿಗೆ ಪೂರಕವಾದ ಶಾಶ್ವತ ಆಯೋಗದ ವರದಿಯನ್ನು ಸರ್ಕಾರ ಪರಿಶೀಲಿಸಿದೆಯೇ; ಯಾವ ಯಾವ ಅಂಗಗಳನ್ನು ಪರಿಗಣಿಸಿ ಜಾರಿಗೆ ತಂದಿದೆ;

ಆ) ಹಿಂದುಳಿದ ಜಾತಿಗಳಲ್ಲಿಯೇ ಅತ್ಯಲ್ಪ ಪ್ರಮಾಣದ ಕೆಲವು ಜಾತಿ ಜನಾಂಗಗಳನ್ನು ಪ್ರತ್ಯೇಕ ವರ್ಗವಾಗಿ ವಿಂಗಡಿಸಿ ವಿಶೇಷ ಮೀಸಲಾತಿ ಸೌಲಭ್ಯ ಒದಗಿಸುವ ಪ್ರಸ್ತಾಪ ಯಾವ ಹಂತದಲ್ಲಿದೆ;

ಇ) ಕಡ್ಡಾಯ ಜಾರಿಗೆ ತರಬೇಕಾದ ಶಿಫಾರಸ್ಸುಗಳ ಬಗ್ಗೆ ಸರ್ಕಾರವು ಮೌನ ವಹಿಸಲು ಕಾರಣವೇನು;

ಈ) ರಾಜ್ಯದ 3.5 ಹಿಂದುಳಿದ ವರ್ಗಗಳ ಜನಸಂಖ್ಯೆಗೆ ಅನ್ವಯವಾಗುವ ವರದಿ ಜಾರಿಗೆ ಇಚ್ಛಾಶಕ್ತಿ ಕೊರತೆ ಇರುವ ಬಗ್ಗೆ ಸರ್ಕಾರದ ನಿಲುವೇನು;

ಉ) ಈ ಜಾತಿ ವರ್ಗಗಳ ಜನರ ಸಾಂಪ್ರದಾಯಿಕ ರಕ್ಷಣೆಗೆ ಕೈ ಗೊಂಡ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಸಮಾಜ ಕಲ್ಯಾಣ ಸಚಿವರು):

ಅ)ಆ) ಆಯೋಗವು ನೀಡಿದ್ದ ಶಿಫಾರಸ್ಸುಗಳಲ್ಲಿ ಒಂದು ಹೊರತುಪಡಿಸಿ ಉಳಿದ 70 ಶಿಫಾರಸ್ಸುಗಳನ್ನು ಸರ್ಕಾರ ಅನುಷ್ಠಾನಗೊಳಿಸಿದೆ.